ರಾಜ್ಯದಲ್ಲಿರುವ ಇ.ಎಸ್.ಐ. ವೈದ್ಯಕೀಯ ಕಾಲೇಜುಗಳನ್ನು ಮುಚ್ಚುವ ಪ್ರಸ್ತಾವ

2658 (3214); ಶ್ರೀ ಚೆಲುವರಾಯಸ್ವಾಮಿ N (ನಾಗಮಂಗಲ)

ಅ) ರಾಜ್ಯದಲ್ಲಿರುವ ಇ.ಎಸ್.ಐ. ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗಳ ಸಂಖ್ಯೆ ಎಷ್ಟು; ಅವು ಯಾವುವು; ಇವುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

ಆ) ಇ.ಎಸ್.ಐ. ವೈದ್ಯಕೀಯ ಕಾಲೇಜುಗಳನ್ನು ಮುಚ್ಚುವ ಬಗ್ಗೆ ಕೇಂದ್ರ ಸರ್ಕಾರ ನಿರ್ಧಾರ ತೆಗೆದುಕೊಂಡಿದೆಯೇ; ಅಧಿಕೃತವಾಗಿ ಏನಾದರೂ ಸೂಚನೆ, ಮಾಹಿತಿ ನೀಡಿರುತ್ತದೆಯೇ;

ಇ) ರಾಜ್ಯದಲ್ಲಿರುವ ಇ.ಎಸ್.ಐ. ವೈದ್ಯಕೀಯ ಕಾಲೇಜುಗಳನ್ನು ಕೇಂದ್ರ ಸರ್ಕಾರ ಮುಚ್ಚುವ ಪ್ರಸ್ತಾವನೆ ಇದ್ದಲ್ಲಿ ರಾಜ್ಯ ಸರ್ಕಾರವೇ ವಹಿಸಿಕೊಂಡು ನಡೆಸಲು ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆಯೇ?

ಶ್ರೀ ಶರಣಪ್ರಕಾಶ ಆರ್. ಪಾಟೀಲ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಅ) ರಾಜ್ಯದಲ್ಲಿ ಬೆಂಗಳೂರಿನ ರಾಜಾಜಿನಗರದಲ್ಲಿ ಮತ್ತು ಕಲಬುರ್ಗಿಯಲ್ಲಿ ತಲಾ 01 ಇ.ಎಸ್.ಐ. ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗಳು ಇರುತ್ತವೆ ಹಾಗೂ ಬೆಂಗಳೂರಿನ ಪೀಣ್ಯಾದಲ್ಲಿ ಒಂದು ಇಎಸ್ಐಸಿ ಆಸ್ಪತ್ರೆ ಇರುತ್ತದೆ.

ಈ ವೈದ್ಯಕೀಯ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಕೆಳಕಂಡಂತಿದೆ:

ಇಎಸ್ಐಸಿ ವೈದ್ಯಕೀಯ ಕಾಲೇಜು, ರಾಜಾಜಿನಗರ, ಬೆಂಗಳೂರು	
ಎಂಬಿಬಿಎಸ್	299
ಸ್ನಾತಕೋತ್ತರ	88
ಇಎಸ್ಐಸಿ ವೈದ್ಯಕೀಯ ಕಾಲೇಜು, ಕಲಬುರ್ಗಿ	
ಎಂಬಿಬಿಎಸ್	199

ಆ) ಹೌದು.

ಕಲಬುರ್ಗಿ ಮತ್ತು ಬೆಂಗಳೂರಿನಲ್ಲಿರುವ ಇಎಸ್‌ಐಸಿ ವೈದ್ಯಕೀಯ ಮಹಾವಿದ್ಯಾಲಯಗಳನ್ನು ರಾಜ್ಯ ಸರ್ಕಾರದ ವಶಕ್ಕೆ ಪಡೆಯುವ ಬಗ್ಗೆ ತಾತ್ವಿಕ ಸಹಮತಿ ನೀಡಲು ಕೇಂದ್ರ ಸರ್ಕಾರವು ರಾಜ್ಯ ಸರ್ಕಾರದ ಪ್ರತಿಕ್ರಿಯೆಯನ್ನು ಕೋರಿರುತ್ತದೆ.

ಇ) ಈ ವೈದ್ಯಕೀಯ ಮಹಾವಿದ್ಯಾಲಯಗಳನ್ನು ರಾಜ್ಯ ಸರ್ಕಾರದ ವಶಕ್ಕೆ ಪಡೆಯುವ ಸಂಬಂಧ ಅನುಸರಿಸಬೇಕಾದ ಮಾರ್ಗಸೂಚಿಗಳು ಹಾಗೂ ಷರತ್ತು ಮತ್ತು ನಿಬಂಧನೆಗಳ ಕುರಿತು ಕೇಂದ್ರ ಹಾಗೂ ರಾಜ್ಯ ಸರ್ಕಾರದ ನಡುವೆ ಚರ್ಚೆಯ ಹಂತದಲ್ಲಿರುವುದರಿಂದ ಈ ಬಗ್ಗೆ ಇನ್ನೂ ಅಂತಿಮ ನಿರ್ಣಯ ಕೈಗೊಳ್ಳಲಾಗಿರುವುದಿಲ್ಲ.

ಮಂಡ್ಯ ಜಿಲ್ಲೆಯಲ್ಲಿ ನಾಯಿ ಕಡಿತಕ್ಕೆ ಒಳಗಾದವರು

2659 (3215); ಶ್ರೀ ಎನ್. ಚೆಲುವರಾಯಸ್ವಾಮಿ (ನಾಗಮಂಗಲ)

ಅ) ಮಂಡ್ಯ ಜಿಲ್ಲೆಯಲ್ಲಿ 2014 ಜನವರಿಯಿಂದ ಡಿಸೆಂಬರ್‌ವರೆಗೆ, 2015 ಜನವರಿ ತಿಂಗಳಲ್ಲಿ ಬೀದಿ ನಾಯಿಗಳ ಕಡಿತಕ್ಕೆ ಒಳಗಾದವರ ಸಂಖ್ಯೆ ಎಷ್ಟು; ನಾಯಿ ಕಡಿತದಿಂದ ಯಾರಾದರೂ ಮರಣ ಹೊಂದಿರುತ್ತಾರೆಯೇ (ಪುರುಷರು, ಸ್ತ್ರೀಯರು, ಮಕ್ಕಳು ಇವರ ಜಿಲ್ಲಾವಾರು ವಿವರ ಒದಗಿಸುವುದು);

ಆ) ನಾಯಿ ಕಡಿತಕ್ಕೆ ಒಳಗಾದವರಿಗೆ ಉಚಿತವಾಗಿ ಸೂಕ್ತ ಚಿಕಿತ್ಸೆಯನ್ನು ನೀಡಲಾಗಿದೆಯೇ; ನಾಯಿ ಕಡಿತದ ಇಂಜೆಕ್ಷನ್ ಔಷಧಿಗಳನ್ನು ಸಾಕಷ್ಟು ಪ್ರಮಾಣದಲ್ಲಿ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ, ಜಿಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ದಾಸ್ತಾನು ಇಡಲಾಗಿದೆಯೇ;

ಇ) ಬೀದಿ ನಾಯಿಗಳ ನಿಯಂತ್ರಣಕ್ಕೆ ಕ್ರಮ ತೆಗೆದುಕೊಳ್ಳುವಂತೆ ನಗರಸಭೆ, ಪುರಸಭೆ, ಗ್ರಾಮಪಂಚಾಯಿತಿಗಳಿಗೆ ಆರೋಗ್ಯ ಇಲಾಖೆಯಿಂದ ಸೂಚನೆ ನೀಡಲಾಗಿದೆಯೇ ?